ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ 4

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE: 7/2/21

# ಜನಪರ ಬಜೆಟ್ ಕೊಡುವೆ: ಸಿಎಂ ಬಿಎಸ್‌ವೈ

## ರಾಜ್ಯದ ರೈತರು, ಜನರಿಗೆ ಬಜೆಟ್‌ನಿಂದ ನೆಮ್ಮದಿ | ರಾಜ್ಯವನ್ನು ನಂ.1 ಮಾಡುವ ಗುರಿ

ಬೆಂಗಳೂರು: ರಾಜ್ಯದ ಜನರ ನಿರೀಕ್ಷೆಗೆ ತಕ್ಕಂತೆ ಉತ್ತಮ ಬಜೆಟ್ ಕೊಡುವ ಸಂಕಲ್ಪ ತೊಟ್ಟಿದ್ದು, ರೈತ ಸಮುದಾಯ ಮತ್ತು ನಾಡಿನ ಜನತೆ ನೆಮ್ಮದಿಯಿಂದ ಬದುಕುವಂತಹ ಬಜೆಟ್ ಕೊಡುತ್ತೇನೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಹೇಳಿದ್ದಾರೆ.

ನಗರದಲ್ಲಿ ಶನಿವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ಮಾರ್ಚ್ 8ರಂದು ಉತ್ತಮ ಬಜೆಟ್ ನೀಡುವ ನಿಟ್ಟಿನಲ್ಲಿ ಈಗಾಗಲೇ ತಯಾರಿಗಳು ನಡೆದಿವೆ. ಈ ಸಾಲಿನ ಬಜೆಟ್ ಜನಪರ ಬಜೆಟ್ ಆಗಲಿದ್ದು, ಜನರಿಗೆ ಅಗತ್ಯವಾದ ಸೌಲಭ್ಯ, ಸವಲತ್ತು, ನೆರವುಗಳನ್ನು ಒದಗಿಸಲಾಗುವುದು ಎಂದು ಹೇಳಿದರು.



ರೈತರು, ದೀನ-ದಲಿತರು ಸೇರಿ ರಾಜ್ಯದ ಜನರು ನೆಮ್ಮದಿಯಿಂದ ಜೀವನ ನಡೆಸುವಂತಹ ಬಜೆಟ್ ಅನ್ನು ನೀಡಲಾಗುವುದು ಎಂದು ಅವರು ತಿಳಿಸಿದರು. 'ಜನರು ನಮ್ಮಿಂದ ಯಾವ ನಿರೀಕ್ಷೆ ಇಟ್ಟುಕೊಂಡಿದ್ದಾರೋ, ಅದೇ ಅತ್ಯುತ್ತಮ ರೀತಿಯಲ್ಲಿ ಕೆಲಸ ಮಾಡುವ ಗುರಿಯನ್ನು ಹೊಂದಲಾಗಿದೆ. ಇದಕ್ಕಾಗಿ ನನ್ನದೇ ಆದ ವಿಶೇಷ ಯೋಜನೆಯನ್ನು ಹಾಕಿಕೊಳ್ಳಲಾಗಿದೆ. ಆ ಪ್ರಕಾರ ಕೆಲಸ ಮಾಡಲಾಗುದು. ಮುಂದಿನ ಎರಡು ವರ್ಷಗಳಲ್ಲಿ ರಾಜ್ಯ ಎಲ್ಲಾ ಕ್ಷೇತ್ರದಲ್ಲಿಯೂ ಅಭಿವೃದ್ಧಿಯಾಗಬೇಕು. ಅಭಿವೃದ್ಧಿಯಲ್ಲಿ ರಾಜ್ಯವು ದೇಶದಲ್ಲೇ ಮೊದಲ ಸ್ಥಾನದಲ್ಲಿರಬೇಕು. ಇದು ತಮ್ಮ ಬಹುದಿನಗಳ ಕನಸಾಗಿದ್ದು, ಈ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ. ಸಚಿವರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳ ಜತೆ ಚರ್ಚೆ ನಡೆಸಲಾಗಿದೆ. ಯಾವ ಯಾವ ಕ್ಷೇತ್ರಗಳಿಗೆ ಏನೇನು ಕೊಡಬೇಕು ಎಂಬುದರ ಬಗ್ಗೆ ಮಾಹಿತಿ ಪಡೆದಿದ್ದೇನೆ' ಎಂದರು.